ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು ಪ್ರತಿವಾದಿ ಪರ ಶ್ರೀ ಹೆಚ್.ಬಿ.ಎಸ್. ವಕೀಲರಿಂದಃ-

ದಾವಾ ಆಸ್ತಿಗೆ ಸಂಬಂಧಿಸಿದಂತೆ ನನ್ನ ಮತ್ತು ನನ್ನ ತಂದೆಯ ಹೆಸರಿನಲ್ಲಿ ಇರುವ ಕಂದಾಯ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ಹಾಗೆಯಕಂದಾಯ ಪಾವತಿ ಮಾಡಿರುವ ಕಂದಾಯ ರಶೀದಿಗಳನ್ನು ಸಹ ಹಾಜರುಪಡಿಸಿರುತ್ತೇನೆ. ನಾನು ಆ ರೀತಿಯ ದಾಖಲೆಗಳನ್ನು ಹಾಜರುಪಡಿಸಲ್ಲದೇ ಇದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಸ್ವಾಧೀನದಲ್ಲಿ ಪ್ರತಿವಾದಿಗಳೇ ಇದ್ದಾರೆ ಎಂದರೆ ಸಾಕ್ಷಿಯು ನಾನು ಮತ್ತು ಪ್ರತಿವಾದಿಗಳು ಇಬ್ಬರು ಇರುತ್ತೇವೆ ಎಂದು ನುಡಿಯುತ್ತಾರೆ.

ನಮ್ಮ ತಂದೆ ಮತ್ತು ತಾನವರು ತೀರಿಕೊಂಡಿರುವ ಬಗ್ಗೆ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ದಾವಾ ಆಸ್ತಿಗೆ ಸಂಬಂಧಿಸಿದಂತೆ ಕಂದಾಯ ದಾಖಲೆಗಳು ನನ್ನ ಹೆಸರಿಗೆ ಮಾಡಿಸುವಂತೆ ಎಸಿ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತ್ತೇನೆ ಮತ್ತು ಅದು ವಜಾ ಆಗಿರುತ್ತದೆ ಎಂದರೆ ಸಾಕ್ಷಿ ಇಲ್ಲ ಅದು ನಮ್ಮ ಪರವಾಗಿ ಆಗಿರುತ್ತದೆ ಎಂದು ನುಡಿಯುತ್ತಾರೆ. ಆರ್ ಎ ಎಲ್ ಕೆ ಪಿ 127/2013-2014 ರ ಪ್ರಕರಣ ದಿನಾಂಕ 06.01.2018 ರಂದು ವಜಾ ಆಗಿರುತ್ತದೆ ಎಂದರೆ ಸರಿಯಲ್ಲ.

ನಮ್ಮ ಚಿಕ್ಕಪ್ಪ ಮತ್ತು ದೊಡ್ಡಪ್ಪನವರು ಅವರ ಭಾಗಕ್ಕೆ ಬಂದ ಆಸ್ತಿಯನ್ನು ಈಗಾಗಲೇ ಮಾರಾಟ ಮಾಡಿರುತ್ತಾರೆ ಎಂದರೆ ಸರಿ. ನನ್ನ ದೊಡ್ಡಪ್ಪ ಬಜ್ಜಪ್ಪ ಎಂಬುವರು ಪ್ರತಿವಾದಿಯ ತಂದೆಗೆ ಮಾರಾಟ

ಮಾಡಿರುತ್ತಾರೆ ಎಂದರೆ ಸರಿ. ದಾವಾ ಆಸ್ತಿಗಳು ನಮ್ಮ ತಾತ ಕುಂಬಬಸವೇಗೌಡ ಹೆಸರಿನಿಂದ 1 ನೇ ಪ್ರತಿವಾದಿಯ ಹೆಸರಿಗೆ ನೇರವಾಗಿ ಖಾತೆ ಆಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಆಸ್ತಿಯನ್ನು 1 ನೇ ಪ್ರತಿವಾದಿರವರು ದಿನಾಂಕ 01.10.2012 ರಂದು 2 ನೇ ಪ್ರತಿವಾದಿ ದಾನ ಪತ್ರ ಬರೆದುಕೊಟ್ಟಿರುತ್ತಾರೆ ಎಂದರೆ ಸರಿ, ಸಾಕ್ಷಿ ಮುಂದುವರೆದು 1 ನೇ ಪ್ರತಿವಾದಿರವರು ನಾವು ದಾವೆ ಸಲ್ಲಿಸಿದ ನಂತರ 2 ನೇ ಪ್ರತಿವಾದಿ ದಾನ ಪತ್ರ ಬರೆದುಕೊಟ್ಟಿರುತ್ತಾರೆ ಎಂದು ನುಡಿಯುತ್ತಾರೆ. ಸರಿದ ದಾನ ಪತ್ರವು 1 ನೇ ಪ್ರತಿವಾದಿ 2 ನೇ ಪ್ರತಿವಾದಿಗೆ ದಾವೆ ಸಲ್ಲಿಸುವ ಪೂರ್ವದಲ್ಲಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ತದನಂತರ 2 ನೇ ಪ್ರತಿವಾದಿ ಹೆಸರಿಗೆ ಖಾತೆ ಬಂದಿದ್ದು ಅವರ ಕಂದಾಯ ಕಟ್ಟುತ್ತಿದ್ದಾರೆ ಎಂದರೆ ಸರಿ. 2 ನೇ ಪ್ರತಿವಾದಿಯವರು ದಾವಾ ಆಸ್ತಿಯ ಮೇಲೆ ಪಿ ಎಲ್ ಡಿ ಬ್ಯಾಂಕಿನಿಂದ ಸಾಲ ಪಡೆದು ಬೋರ್ ವೆಲ್ ತೆಗೆಯಿಸಿ ಸಾಗುವಳಿ ಮಾಡಿಕೊಂಡುಬರುತ್ತಿದ್ದಾರೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ ಮಾಡಿಕೊಂಡಿದ್ದ ಸಾಲವನ್ನು ತೀರುವಳಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಗಳಿಗೆ ಸಂಬಂಧಿಸಿದಂತೆ 1952 ರಲ್ಲಿ ಪಂಚಾಯಿತಿ ಪಾರಿಕತ್ ಆಗಿರುತ್ತದೆ ಎಂದರೆ ಸರಿ. ಆ ಪಾರಿಕತ್ತಿನಲ್ಲಿ ನಮಗೆ ಯಾವುದೇ ಭಾಗ ಬಂದಿರುವುದಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಃ ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು
ರಾಮನಗರ.